# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಕಾರ್ಯಕಲಾಪಗಳ ಪಟ್ಟಿ**

**ಸೋಮವಾರ, ದಿನಾಂಕ: 15ನೇ ಮಾರ್ಚ್, 2021**

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

01) 2ನೇ ಪಟ್ಟಿಯಿಂದ ತಡೆಹಿಡಿಯಲಾದ
**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ**
ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:
30 (173)

02) 2ನೇ ಪಟ್ಟಿಯಿಂದ ತಡೆಹಿಡಿಯಲಾದ
**ಶ್ರೀ ಅರುಣ ಶಹಾಪೂರ**
ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:
23(155)

03) 5ನೇ ಪಟ್ಟಿಯಿಂದ ತಡೆಹಿಡಿಯಲಾದ
**ಶ್ರೀ ಅರುಣ ಶಹಾಪೂರ**
ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:
69 (476)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

04) 9ನೇ ಪಟ್ಟಿಯಿಂದ ತಡೆಹಿಡಿಯಲಾದ
**ಶ್ರೀ ಕೆ.ಎ. ತಿಪ್ಪೇಸ್ವಾಮಿ**
ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:
126 (866)

ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

05) 9ನೇ ಪಟ್ಟಿಯಿಂದ ತಡೆಹಿಡಿಯಲಾದ
**ಶ್ರೀಮತಿ ಭಾರತಿ ಶೆಟ್ಟಿ**
ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:
129 (789)

ಮಾನ್ಯ ಪ್ರವಾಸೋದ್ಯಮ, ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೆರಡನೆಯ ಪಟ್ಟಿ

## 02. ವಿತ್ತೀಯ ಕಾರ್ಯಕಲಾಪ

2021-22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ

## 03. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಎನ್. ರವಿಕುಮಾರ್** ಅವರು 2020-21ನೇ ಸಾಲಿನಲ್ಲಿ ರಾಜ್ಯದಲ್ಲಿ ಹೊಸದಾಗಿ 62 ನರ್ಸಿಂಗ್ ಮತ್ತು 40 ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳನ್ನು ಪ್ರಾರಂಭಿಸಲು ಅವಶ್ಯವಿರುವ ಮೂಲಭೂತ ಸೌಕರ್ಯ ಹಾಗೂ ಬೋಧಕ ಸಿಬ್ಬಂದಿಗಳ ಕೊರತೆ ಇದ್ದರೂ ಕೂಡ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

ಆ) **ಶ್ರೀ ಕೆ. ಹರೀಶ್ ಕುಮಾರ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಕರಾವಳಿ ಭಾಗದಲ್ಲಿ ಮೀನುಗಾರರ ಸರ್ವತೋಮುಖ ಅಭಿವೃದ್ಧಿಗೆ ನಿರ್ದಿಷ್ಟ ಕಾಲಮಿತಿಯಲ್ಲಿ ಯೋಜನೆಗಳನ್ನು ಜಾರಿಗೊಳಿಸುವ ಕುರಿತು ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

ಇ) **ಶ್ರೀ ಶಶೀಲ್ ಜಿ. ನಮೋಶಿ** ಅವರು ಹೈದ್ರಾಬಾದ್-ಕರ್ನಾಟಕ (ಕಲ್ಯಾಣ ಕರ್ನಾಟಕ) ಪ್ರದೇಶಾಭಿವೃದ್ಧಿಗೆ ಸಂಬಂಧಿಸಿದಂತೆ ಭಾರತ ಸಂವಿಧಾನದ ಅನುಚ್ಛೇದ 371(ಜೆ)ಗೆ ತಂದಿರುವ ತಿದ್ದುಪಡಿಯು ಸಮರ್ಪಕವಾಗಿ ಜಾರಿಯಾಗದಿರುವುದರಿಂದ ಹೈದ್ರಾಬಾದ್-ಕರ್ನಾಟಕ ಪ್ರದೇಶದ ವಿದ್ಯಾರ್ಥಿಗಳು/ನಿರುದ್ಯೋಗಿಗಳು ತೊಂದರೆ ಅನುಭವಿಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

ಅ) **ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು,** ಅವರು ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟ ಪ್ರದೇಶದ ಖಾನಾಪುರ ತಾಲ್ಲೂಕಿನ ನೇರಸೆ, ಶಿರೊಳಿ ಹಾಗೂ ಇತರೆ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿರುವ ಜನರು ಮೂಲಭೂತ ಸೌಲಭ್ಯಗಳಿಲ್ಲದೆ ಶೋಚನೀಯ ಸ್ಥಿತಿ ಎದುರಿಸುತ್ತಿರುವ ಕುರಿತು ಪ್ರಸ್ತಾಪಿಸುವುದು.

ಆ) **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಎನ್. ಅಪ್ಪಾಜಿಗೌಡ, ಕೆ.ಟಿ. ಶ್ರೀಕಂಠೇಗೌಡ, ಗೋವಿಂದರಾಜು** ಅವರುಗಳು ರಾಜ್ಯದಲ್ಲಿ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್-19 ಸಾಂಕ್ರಾಮಿಕ ರೋಗದ ಪರಿಣಾಮದಿಂದಾಗಿ ಲಾಕ್‌ಡೌನ್ ವಿಧಿಸಲಾಗಿ ಶಾಲಾ ಮಕ್ಕಳ ಕಲಿಕೆಯಲ್ಲಿ ತೀವ್ರ ಹಿನ್ನಡೆ ಉಂಟಾಗಿರುವುದರಿಂದ ವಿದ್ಯಾರ್ಥಿಗಳ ಕುಟುಂಬಗಳ ಸ್ಥಿತಿ, ಆರ್ಥಿಕ ಸಂಕಷ್ಟ ಹಾಗೂ ಜೀವನ ಶೈಲಿಗಳ ಕುರಿತಂತೆ ಸಮಗ್ರ ಸಮೀಕ್ಷೆ ನಡೆಸುವ ಕುರಿತು ಪ್ರಸ್ತಾಪಿಸುವುದು.

ಇ) **ಶ್ರೀಮತಿ ಎಸ್.ವೀಣಾ ಅಚ್ಚಯ್ಯ** ಅವರು ಕೊಡುಗು ಜಿಲ್ಲೆಯಲ್ಲಿ ವನ್ಯಪ್ರಾಣಿಗಳ ದಾಳಿಯಿಂದಾಗಿ ಜೀವ ಹಾನಿ ಹಾಗೂ ಬೆಳೆಹಾನಿ ಹೆಚ್ಚಾಗಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

..3

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

<u>ಶ್ರೀಯುತರುಗಳಾದ:</u>

| | |
|---|---|
| ಎಸ್.ಆರ್. ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು,<br>ಎಂ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು,<br>ಕೆ. ಪ್ರತಾಪಚಂದ್ರ ಶೆಟ್ಟಿ,<br>ನಸೀರ್ ಅಹಮದ್,<br>ಬಸವರಾಜ ಪಾಟೀಲ್ ಇಟಗಿ,<br>ಕೆ. ಹರೀಶ್ ಕುಮಾರ್,<br>ಆರ್. ಪ್ರಸನ್ನಕುಮಾರ್ ಮತ್ತು<br>ಪ್ರಕಾಶ್ ಕೆ. ರಾಥೋಡ್ ಅವರುಗಳು | ಚಿಕ್ಕಬಳ್ಳಾಪುರ ಜಿಲ್ಲೆಯ ಗುಡಿಬಂಡೆ ಸರಹದ್ದಿನಲ್ಲಿ ಬರುವ ಹಿರೇನಾಗವಲ್ಲಿ ಗ್ರಾಮದ ಬಳಿ ಕಾನೂನು ಬಾಹಿರವಾಗಿ ನಡೆಯುತ್ತಿರುವ ಗಣಿಗಾರಿಕೆ ಕುರಿತು |

**ಎಸ್. ನಿರ್ಮಲ**
**ಜಂಟಿ ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
**www.kla.kar.nic.in/council/council.htm**